ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2015–16 : ದಿನಾಂಕ: 07–4–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಬಾಬು ಜಗಜೀವನರಾಂ ರವರ 108ನೇ ಜನ್ಮ ದಿನಾಚರಣೆ, ಪ್ರಶಸ್ತಿ ಪ್ರದಾನ ಸಮಾರಂಭ.<br><br>ಉದ್ಘಾಟನೆ:<br><br>ಶ್ರೀ ಸಿದ್ದರಾಮಯ್ಯ,<br>ಮುಖ್ಯ ಮಂತ್ರಿಗಳು,<br><br>ಅಧ್ಯಕ್ಷತೆ:<br><br>ಶ್ರೀ ಹೆಚ್. ಆಂಜನೇಯ,<br>ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.<br><br>ಉಪನ್ಯಾಸ:<br><br>ಡಾ. ಕೆ. ಮರುಳಸಿದ್ದಪ್ಪ,<br>ಖ್ಯಾತ ಸಾಹಿತಿಗಳು | 08–04–2015<br>ಬುಧವಾರ<br>ಸಂಜೆ<br>5–00 ಗಂಟೆಗೆ | ಬ್ಯಾಂಕ್ವೆಟ್ ಹಾಲ್,<br>ವಿಧಾನಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಅಂಚೆ ಶಿಕ್ಷಣ : ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 7 (ಕರ್ನಾಟಕ ವಾರ್ತೆ)

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು 2015-16 ನೇ ಶೈಕ್ಷಣಿಕ ಸಾಲಿಗೆ ದೂರ ಶಿಕ್ಷಣದ ಮೂಲಕ ಕನ್ನಡ ಭಾಷೆಯಲ್ಲಿ 7ನೇ ತರಗತಿಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಂದ "ಸಮಗ್ರ ಕೃಷಿ", "ಆಹಾರ ಧಾನ್ಯ, ಹಣ್ಣು ಮತ್ತು ತರಕಾರಿಗಳ ಕೊಯ್ಲೋತ್ತರ ನಿರ್ವಹಣೆ" ಮತ್ತು ಓದು ಬರಹ ಬಲ್ಲವರಿಂದ "ಸಾವಯವ ಕೃಷಿ' (ಅಂಚೆ ಶಿಕ್ಷಣ) ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿರುವ ಕೃಷಿ ವಿಜ್ಞಾನ ಕೇಂದ್ರಗಳು ಅಥವಾ ವಿಸ್ತರಣಾ ನಿರ್ದೇಶನಾಲಯ, ಹೆಬ್ಬಾಳ, ಬೆಂಗಳೂರು – 560 024 ಇವರಿಂದ ಭರ್ತಿಮಾಡಿದ ಅರ್ಜಿಗಳನ್ನು ದಿನಾಂಕ 30-4-2015 ರ ಒಳಗೆ ವಿಸ್ತರಣಾ ನಿರ್ದೇಶಕರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಕೃಷಿ ವಿಶ್ವವಿದ್ಯಾನಿಲಯದ website www.uasbangalore.edu.in ಅಥವಾ ದೂರವಾಣಿ ಸಂಖ್ಯೆ 080-23418883 ಅಥವಾ 080-23410560 ಸಂಪರ್ಕಿಸಿ.

ಬಾಬು:ಜಿಪಿಆರ್:

# ಇಲಾಖಾ ಪರೀಕ್ಷೆ : ಪರೀಕ್ಷಾ ಕೇಂದ್ರ ಬದಲು

**ಬೆಂಗಳೂರು, ಏಪ್ರಿಲ್ 7 (ಕರ್ನಾಟಕ ವಾರ್ತೆ)**

2015 ರ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗೆ ಸಂಬಂಧಿಸಿದಂತೆ ದಿನಾಂಕ 12-4-2015 ರಂದು ನಡೆಸುವ ಅಕೌಂಟ್ಸ್ ಹೈಯರ್ ವಿಷಯಕ್ಕೆ ನಿಗದಿಪಡಿಸಲಾಗಿದ್ದ ಬೆಂಗಳೂರು ಜಿಲ್ಲೆಯ ಉಪ ಪರೀಕ್ಷಾ ಕೇಂದ್ರವಾದ BBMP GIRLS COMPOSITE PU COLLEGE, SANGAM CIRCLE, PADARAYANAPURA NEAR JJR NAGAR POLICE STATION BENGALURU – 560 026 ನ್ನು ಕಾರಣಾಂತರದಿಂದ ರದ್ದುಪಡಿಸಿ, ಇಲ್ಲಿಗೆ ಹಂಚಿಕೆ ಮಾಡಲಾಗಿದ್ದ ಅಭ್ಯರ್ಥಿಗಳಿಗೆ ಬೇರೆ ಉಪ ಕೇಂದ್ರಗಳಿಗೆ ಮರು ಹಂಚಿಕೆ ಮಾಡಿ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸಲಾಗಿದೆ. ಸಂಬಂಧಿತ ಅಭ್ಯರ್ಥಿಗಳು ಈಗಾಗಲೇ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡಿದ್ದರೂ ಸಹ ಪುಸ್ತುತ ಆಯೋಗದ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗಿರುವ ಬದಲಾದ ಉಪ ಪರೀಕ್ಷಾ ಕೇಂದ್ರದ ಮಾಹಿತಿಯನ್ನೊಳಗೊಂಡ ಪ್ರವೇಶ ಪತ್ರವನ್ನು ಮತ್ತೊಮ್ಮೆ ಡೌನ್‌ಲೋಡ್ ಮಾಡಿಕೊಂಡು ಅದರಂತೆ ದಿನಾಂಕ 12-04-2015 ರಂದು ಕೆಳಗೆ ನಮೂದಿಸಿರುವ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಗೆ ಹಾಜರಾಗಲು ಸೂಚಿಸಿದೆ.

ಬಾಬು:ಜಿಪಿಆರ್:

# ಸಚಿವರ ಪ್ರವಾಸ

**ಬೆಂಗಳೂರು, ಏಪ್ರಿಲ್ 7 (ಕರ್ನಾಟಕ ವಾರ್ತೆ)**

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವೆ ಶ್ರೀಮತಿ ಉಮಾಶ್ರೀ ಅವರು ಏಪ್ರಿಲ್ 9 ರಿಂದ 11 ರವರೆಗೆ ಬೆಳಗಾವಿ, ಧಾರವಾಡ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು.

ಬಾಬು:ಜಿಪಿಆರ್:

# ಆಹಾರ ಪದಾರ್ಥಗಳ ತಡೆಗೆ ಕ್ರಮ :

ಸಚಿವ ಯು.ಟಿ. ಖಾದರ್

**ಬೆಂಗಳೂರು, ಏಪ್ರಿಲ್ 7 (ಕರ್ನಾಟಕ ವಾರ್ತೆ)**

ಆಹಾರ ಪದಾರ್ಥಗಳ ಕಲಬೆರೆಕೆ ತಡೆಗಟ್ಟಲು ಕಾನೂನು ರೂಪಿಸಿ ಕ್ರಮ ಕೈಗೊಳ್ಳಲು ಸರ್ಕಾರ ಚಿಂತನೆ ನಡೆಸಿದ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶ್ರೀ ಯು.ಟಿ. ಖಾದರ್ ಅವರು ತಿಳಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂದು ಏರ್ಪಡಿಸಿದ್ದ ವಿಶ್ವ ಆರೋಗ್ಯ ದಿನ ಹಾಗೂ ಇಂದ್ರ ಧನುಷ್ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಸಚಿವರು ಸಮಾಜಕ್ಕೆ ಕಟ್ಟ ಕಡೆಯ ವ್ಯಕ್ತಿಗೂ ಉತ್ತಮ ಆರೋಗ್ಯ ಸೇವೆ ಸಿಗುವಂತಾಗಬೇಕು ಮತ್ತು ಆರೋಗ್ಯ ಸೇವೆ ಮತ್ತಷ್ಟು ಬಲಿಷ್ಟಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಕೆಲಸ ಮಾಡುತ್ತಿದೆ ಎಂದರು.

ಇಂದ್ರ ಧನುಷ್ ಅಭಿಯಾನ ಕಾರ್ಯಕ್ರಮದಡಿ ರಾಜ್ಯದದಲ್ಲಿ 9 ಮಾರಕ ರೋಗಗಳಿಗೆ ಲಸಿಕೆ ನೀಡಲಾಗುತ್ತಿದೆ ಎಂದ ಆರೋಗ್ಯ ಸಚಿವರು ಗಂಟಲು ಮಾರಿ, ನಾಯಿ ಕೆಮ್ಮು, ಧನುರ್ವಾಯು, ಪೋಲಿಯೋ, ದಢಾರ, ಬಾಲಕ್ಷಯ ಮೆದುಳುಜ್ವರ ಮತ್ತು ನಿಮೋನಿಯಾ ಮುಂತಾದ ಕಾಯಿಲೆಗಳಿಗೆ ಲಸಿಕೆ ಹಾಕಲಾಗುತ್ತಿದ್ದು ರಾಜ್ಯದಲ್ಲಿ ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ಬೆಂಗಳೂರು ನಗರ ಜಿಲ್ಲೆಗಳನ್ನು ಇಂದ್ರ ಧನುಷ್ ಅಭಿಯಾನಕ್ಕೆ ಈಗಾಗಲೇ ಗುರುತಿಸಲಾಗಿದೆ ಎಂದರು.

ತಿಂಗಳಿಗೆ ಒಂದರಂತೆ 2015 ರ ಏಪ್ರಿಲ್‌ನಿಂದ ಜುಲೈವರೆಗೆ ನಾಲ್ಕು ತಿಂಗಳೂಗಳಲ್ಲಿ ನಾಲ್ಕು ಬಾರಿ ತೀವ್ರತರ ಇಂದ್ರ ಧನುಷ್ ಲಸಿಕಾ ಸಪ್ತಾಹವನ್ನು ಆಯೋಜಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಬಾಬು:ಜಿಪಿಆರ್:

# ಉಪ ಕಾರ್ಯದರ್ಶಿ ರಾಮಕೃಷ್ಣ ಅಮಾನತು

ಬೆಂಗಳೂರು, ಏಪ್ರಿಲ್ 7 (ಕರ್ನಾಟಕ ವಾರ್ತೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಗ್ರಾಮಿಣ ನೀರು ಸರಬರಾಜು ವಿಭಾಗದ ಉಪ ಕಾರ್ಯದರ್ಶಿ ರಾಮಕೃಷ್ಣ ಅವರನ್ನು ಅಸಮರ್ಪಕ ಹಾಗೂ ಅಶಿಸ್ತಿನ ಹಣಕಾಸು ನಿರ್ವಹಣೆಯಡಿ ಅಮಾನತುಗೊಳಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಹೆಚ್. ಕೆ. ಪಾಟೀಲ್ ಅವರು ತಿಳಸಿದರು.

ಇಲಾಖೆ ಹಾಗೂ ಮೇಲಧಿಕಾರಿಗಳ ಗಮನಕ್ಕೆ ತಾರದೆ ಸದರಿ ಅಧಿಕಾರಿಯು ಆಂಧ್ರಬ್ಯಾಂಕ್ ಗಾಂಧಿನಗರ ಶಾಖೆಯಲ್ಲಿ 134 ಕೋಟಿ ರೂ. ಇಲಾಖಾ ಹಣವನ್ನು ಠೇವಣಿಯಾಗಿಟ್ಟು ವಹಿವಾಟು ನಡೆಸಿದ್ದು ಒಟ್ಟು 9 ಸಾರಿ ಆ ಬ್ಯಾಂಕಿನಲ್ಲಿ ವಹಿವಾಟು ನಡೆಸಿರುವುದು ಗಮನಕ್ಕೆ ಬಂದಿದ್ದು ಇದು ಗಂಭೀರ ಲೋಪವಾಗಿದೆ. ತಕ್ಷಣದಿಂದಲೇ ಜಾರಿಗೆ ಬರುವಂತೆ ಅಮಾನತು ಮಾಡಿದ್ದು ಲೋಕಾಯುಕ್ತ ಸಂಸ್ಥೆಯಿಂದ ಈ ಪ್ರಕರಣ ಕುರಿತು ಇಲಾಖಾ ವಿಚಾರಣೆಯನ್ನು ನಡೆಸಲು ಸೂಚಿಸಲಾಗಿದೆ ಎಂದ ಸಚಿವರು ಇಷ್ಟೇ ಅಲ್ಲದೆ ಇನ್ನೂ ನೂರಾರು ಕೋಟಿ ರೂ. ಅವ್ಯವಹಾರ ನಡೆದಿರುವ ಬಗ್ಗೆ ಮಾಹಿತಿ ದೊರಕಿದ್ದು ನಿಖರವಾದ ಮಾಹಿತಿ ದೊರತ ಮೇಲೆ ನಿಯಮ ಬಾಹಿರ ಕೆಲಸ ಮಾಡಿರುವುದು ಧೃಢಪಟ್ಟಲ್ಲಿ ಅಂತಹವರ ಮೇಲೆ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಸಚಿವ ಹೆಚ್.ಕೆ. ಪಾಟೀಲ್ ಅವರು ಇದೇ ಸಂದರ್ಭದಲ್ಲಿ ತಿಳಸಿದರು.

ಬಾಬು/ಕೆಪಿಪಿ/ಕೆಎಂ